ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105

ಕುಲಸಚಿವರು
08392-242703
08392-242097

ಸಂಖ್ಯೆ: ವಿಶ್ರೀಕೃವಿಬ/ವಿಮವಿ/ಸ್ನಾತಕ/ಸುತ್ತೋಲೆ/2021-22/170 ದಿನಾಂಕ: 27.04.2021

# ಸುತ್ತೋಲೆ

ವಿಷಯ: ಕೋವಿಡ್-19 ಎರಡನೇ ಅಲೆಯ ಹಿನ್ನೆಲೆಯಲ್ಲಿ ಸ್ನಾತಕ 2, 4 ಮತ್ತು 6 ನೇ ಸೆಮಿಸ್ಟರ್ ತರಗತಿಗಳನ್ನು ಆನ್‌ಲೈನ್ ಮೂಲಕ ತೆಗೆದುಕೊಳ್ಳುವ ಕುರಿತು.

ಉಲ್ಲೇಖ: 1. ಪ್ರಾಂಶುಪಾಲರ ಸಭೆಯ ದಿನಾಂಕ. 23.04.2021
2. ರಾಜ್ಯ ಸರ್ಕಾರದ ಮಾರ್ಗಸೂಚಿ ದಿನಾಂಕ. 26.04.2021
3. ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ. 27.04.2021

***

ಈ ಸುತ್ತೋಲೆ ಮೂಲಕ ವಿಶ್ವವಿದ್ಯಾಲಯದ ಸಂಲಗ್ನತೆ ಹೊಂದಿರುವ ಎಲ್ಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳ ಗಮನಕ್ಕೆ ತರುವುದೇನೆಂದರೆ ರಾಷ್ಟ್ರಾದ್ಯಂತ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದು ಶೈಕ್ಷಣಿಕ ಚಟುವಟಿಕೆಗಳನ್ನು ರಾಜ್ಯ ಸರ್ಕಾರದ ನಿರ್ದೇಶನದ ಮೇರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ದಿನಾಂಕ. 23.04.2021 ರಂದು ಜರುಗಿದ ಪ್ರಾಂಶುಪಾಲರ ಸಭೆಯಲ್ಲಿ ಚರ್ಚಿಸಿದಂತೆ 2020-21 ನೇ ಸಾಲಿನ ಸ್ನಾತಕ 2, 4 ಮತ್ತು 6 ನೇ ಸೆಮಿಸ್ಟರ್‌ಗಳ ಮತ್ತು ಬಿ.ಇಡಿ 3 ನೇ ಸೆಮಿಸ್ಟರ್‌ನ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಅಭ್ಯುದಯವನ್ನು ಪರಿಗಣಿಸಿ ದಿನಾಂಕ. 03.05.2021 ರಿಂದ ಅನ್ವಯಿಸಿ ಆನ್‌ಲೈನ್ ಮುಖಾಂತರ ಜರುಗಿಸಲು ಸೂಚಿಸಲಾಗಿದೆ. ಸ್ಮಾರ್ಟ್ ಪೋನ್, ಲ್ಯಾಪ್‌ಟಾಪ್ ಹಾಗೂ ಕಂಪ್ಯೂಟರ್‌ಗಳ ಸೌಲಭ್ಯ ಹೊಂದಿರದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿವಿಧ ತರಗತಿಗಳ ಬೋಧನಾ ಪಠ್ಯವು ಮಹಾವಿದ್ಯಾಲಯಗಳ ಜಾಲತಾಣ, ಯುಟ್ಯೂಬ್ ಹಾಗೂ ಈ-ಮೇಲ್ ಮುಖಾಂತರ ವಿದ್ಯಾರ್ಥಿಗಳಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.

ಮುಂದುವರೆದು, ಸದರಿ ವಿಷಯವನ್ನು ಮಹಾವಿದ್ಯಾಲಯಗಳ ಬೋಧಕ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರಲು ಹಾಗೂ ಕಾಲಕಾಲಕ್ಕೆ ಸರ್ಕಾರ/ವಿಶ್ವವಿದ್ಯಾಲಯವು ಹೊರಡಿಸುವ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

27.4.21

ಕುಲಸಚಿವರು
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಗೆ,
ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ಹಾಗೂ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆ.

ಪ್ರತಿಗಳು:
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ಕುಲಸಚಿವರು(ಮೌಲ್ಯಮಾಪನ), ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
3. ಕಛೇರಿ ಪ್ರತಿ.